# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**
ತಿನ್ನುವ ಅನ್ನದ ಮೇಲೆ ಅಹಂಕಾರ ಪಟ್ಟರೆ,
ರೋಗ ರುಜಿನದಿಂದ ಬಳಲುತ್ತಾನೆ..
ಹೆಣ್ಣನ್ನು ತಿರಸ್ಕಾರ ಭಾವದಿಂದ ನೋಡಿದರೆ
ಭ್ರಷ್ಟಚಾರಿಯಾಗಿಯೇ ಉಳಿಯುತ್ತಾನೆ..
ಒದಗಿ ಬಂದ ಸಂಪತ್ತನ್ನು ಕಡೆಗಣಿಸಿದರೆ
ದರಿದ್ರನಾಗಿಯೇ ಇರುತ್ತಾನೆ..
ಕಾಯಕದ ಮೇಲೆ ಪ್ರೀತಿ ತೋರದಿದ್ದರೆ
ನಿರುದ್ಯೋಗಿಯಾಗಿಯೇ ಬಾಳುತ್ತಾನೆ..
ಕುಟುಂಬ ಸಂಸಾರದಲ್ಲಿ ಒಲವು ಇಲ್ಲದಿದ್ದರೆ
ಅನಾಥನಾಗಿಯೇ ಉಳಿಯುತ್ತಾನೆ.
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 22-05-2026 to 28-05-2026 ಬೆಲೆ:10-00 ಸಂಪುಟ–1 ಸಂಚಿಕೆ–34 ಪುಟಗಳು–6












ಎರಡು ದಿನಗಳ ಹಿಂದೆ ದುಬಾರೆ ಸಾಕಾನೆ ಶಿಬಿರದಲ್ಲಿ ಸಾಕಾನೆಗಳ ಕಾಳಗದಿಂದ ಚೆನ್ನೈ ಮೂಲದ ಮಹಿಳೆಯೋರ್ವರು ಮೃತಪಟ್ಟ ಸುದ್ದಿ ದುಬಾರೆ ಶಿಬಿರಕ್ಕೆ ಕಪ್ಪು ಚುಕ್ಕೆ ಎಂಬಂತಾಗಿದೆ. ಸಾಮಾನ್ಯವಾಗಿ ದೇಶ ವಿದೇಶಗಳಿಂದ ಬರುವ ಸಾವಿರಾರು ಪ್ರವಾಸಿಗರು ಸಾಕಾನೆಗಳ ಬಳಿ ನಿಂತು ಫೋಟೋ ತೆಗೆಸಿಕೊಳ್ಳುವುದು, ಆನೆಗಳಿಗೆ ಆಹಾರವನ್ನು ನೀಡುವುದು ಮತ್ತು ಆನೆಗಳಿಗೆ ಸ್ನಾನ ಮಾಡಿಸುವುದು ಇಲ್ಲಿ ಸಾಮಾನ್ಯವಾಗಿ ಕಾಣಸಿಗುತ್ತದೆ. ಇದು ಅಧಿಕೃತವಾಗಿ ನಡೆಯುವುದಲ್ಲವಾದರೂ ಇಲ್ಲಿಗೆ ಬರುವ ಕೆಲವು ಪ್ರವಾಸಿಗರು ಸಾಕಾನೆಗಳ ಮಾವುತರಿಗೆ ಸ್ವಲ್ಪ ಹಣವನ್ನು ನೀಡಿ ಇಂತಹ ಹುಚ್ಚಾಟಕ್ಕೆ ಮುಂದಾಗುತ್ತಾರೆ. ಸಾಕಾನೆಗಳು ಯಾವ ಸಮಯದಲ್ಲಿ ಯಾವ ರೀತಿಯಲ್ಲಿ ಇರುತ್ತದೆ ಎನ್ನುವುದು ಯಾರಿಗೂ ತಿಳಿದಿರುವುದಿಲ್ಲ. ಎಷ್ಟೋ ಸಲ ಸಾಕಾನೆಗಳನ್ನು ಪಳಗಿಸುವ ಮಾವುತನ ಮೇಲೆಯೇ ದಾಳಿ ನಡೆಸಿ ಬಲಿ ಪಡೆದ ಉದಾಹರಣೆಗಳು ಇವೆ. ಹೀಗಿರುವಾಗ ಯಾವುದೇ ಪ್ರಾಣಿಗಳ ಜೊತೆ ಹುಚ್ಚಾಟ ಆಡುವ ಮೊದಲು ನಮ್ಮ ಎಚ್ಚರದಲ್ಲಿ ನಾವಿರುವುದು ಉತ್ತಮ.

## ಸಂಚಾರಿ ಪೀಠ ಸ್ಥಾಪನೆಗೆ ಪಕ್ಷ ಬೇಧ ಮರೆತು ಬೆಂಬಲ –ಕಾಮತ್



**ಮಂಗಳೂರು:** ನಗರದಲ್ಲಿ ಹೈಕೋರ್ಟ್ ಸಂಚಾರಿ ಪೀಠ ಸ್ಥಾಪನೆಯಾಗಬೇಕು ಎನ್ನುವುದು ಇಡೀ ಜಿಲ್ಲೆಯ ಜನರ ಹಕ್ಕಾಗಿದ್ದು, ಈ ನಿಟ್ಟಿನಲ್ಲಿ ಪಕ್ಷಾತೀತವಾಗಿ ಒಗ್ಗಟ್ಟಿನ ಪ್ರಯತ್ನಗಳು ನಡೆಯುತ್ತಿವೆ ಎಂದು ಮಂಗಳೂರು ದಕ್ಷಿಣ ವಿಧಾನ ಸಭಾ ಕ್ಷೇತ್ರದ ಶಾಸಕರಾದ ವೇದವ್ಯಾಸ ಕಾಮತ್ ತಿಳಿಸಿದ್ದಾರೆ. ಈಗಾಗಲೇ ಈ ಕಾರ್ಯ ಪ್ರಗತಿಯಲ್ಲಿದ್ದು, ಆರಂಭದಿಂದಲೂ ಭಾರತೀಯ ಜನತಾ ಪಾರ್ಟಿ ಹಾಗೂ ನಮ್ಮ ನಿಲುವು ಮಂಗಳೂರಿನಲ್ಲಿ ಪೀಠ ಸ್ಥಾಪನೆಯಾಗಬೇಕು ಎಂಬುದೇ ಆಗಿದೆ ಎಂದು **3ನೇ ಪುಟಕ್ಕೆ**

## ಸತತ 15ನೇ ವರ್ಷವೂ ಕುಕ್ಕೆ ಸುಬ್ರಹ್ಮಣ್ಯವೇ ನಂ. 1

**ಮಂಗಳೂರು:** ಜಗದಗಲ ಪ್ರಸಿದ್ಧಿಯ ನಾಗಾರಾಧನಾ ಪುಣ್ಯಕ್ಷೇತ್ರವಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನವು ಆದಾಯ ಗಳಿಕೆಯಲ್ಲಿ ಮತ್ತೊಮ್ಮೆ ಇಡೀ ರಾಜ್ಯಕ್ಕೇ 'ಅಧಿಪತಿ'ಯಾಗಿ ಹೊರಹೊಮ್ಮಿದೆ. ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ 2025–26ನೇ ಸಾಲಿನ ಆರ್ಥಿಕ ವರ್ಷದ ಲೆಕ್ಕಾಚಾರ ಮುಕ್ತಾಯಗೊಂಡಾಗ, ಕುಕ್ಕೆ ದೇವಳವು ಬರೋಬ್ಬರಿ 167.89 ಕೋಟಿ ರೂಪಾಯಿಗಳನ್ನು ತನ್ನ ಮುಡಿಗೇರಿಸಿಕೊಂಡಿದೆ. ಈ ಮೂಲಕ ಸತತ 15 ವರ್ಷಗಳಿಂದ ರಾಜ್ಯದ ಅತ್ಯಂತ ಶ್ರೀಮಂತ ದೇವಸ್ಥಾನ ಎಂಬ ಹೆಗ್ಗಳಿಕೆಯನ್ನು ಯಾರೂ ಅಲುಗಾಡಿಸಲಾಗದಂತೆ ತನ್ನಲ್ಲೇ ಕಾಯ್ದುಕೊಂಡಿದೆ. ಕುಕ್ಕೆ ಸುಬ್ರಹ್ಮಣ್ಯನ ಸನ್ನಿಧಿಗೆ ದೇಶ–ವಿದೇಶಗಳಿಂದ ಹರಿದುಬರುವ ಭಕ್ತಸಾಗರ ಹಾಗೂ ಅವರ ಅಚಲ ನಂಬಿಕೆಯೇ ದೇವಳದ ಆದಾಯ ಇಷ್ಟೊಂದು **3ನೇ ಪುಟಕ್ಕೆ**




## ಹಿಜಾಬ್‌ಗೆ ಅವಕಾಶ ನೀಡಿ ಪ್ರಚೋದನೆ ನೀಡುತ್ತಿದ್ದಾರೆ –ಶರಣ್ ಪಂಪ್‌ವೆಲ್

**ಮಂಗಳೂರು:** ರಾಜ್ಯದ ಕಾಂಗ್ರೆಸ್ ಸರ್ಕಾರ ಶಾಲಾ–ಕಾಲೇಜುಗಳಲ್ಲಿ ಹಿಜಾಬ್‌ಗೆ ಮರು–ಅವಕಾಶ ನೀಡಿರುವುದು ತೀವ್ರ ಖಂಡನೀಯವಾಗಿದ್ದು, ಈ ಹಿಜಾಬ್ ಪ್ರೇಮಿ ಸರ್ಕಾರದ ತುಘಲಕ್ ನೀತಿಯನ್ನು ವಿರೋಧಿಸಿ ಯುವ ಸಮುದಾಯ ಬೀದಿಗಿಳಿದು ಹೋರಾಟ ನಡೆಸಬೇಕು ಎಂದು ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಪ್ರಾಂತ ಸಹಕಾರ್ಯದರ್ಶಿ ಶರಣ್ ಪಂಪ್‌ವೆಲ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕದ್ರಿಯ ವಿಶ್ವಶ್ರೀ ಆವರಣದಲ್ಲಿ ಮಾತನಾಡಿದ ಅವರು, ಶಾಲಾ–ಕಾಲೇಜುಗಳಲ್ಲಿ ಪಾವಿತ್ರ್ಯತೆ **3ನೇ ಪುಟಕ್ಕೆ**









ಕರಾವಳಿ ತರಂಗಿಣಿ

# ಕಲಾ ತರಂಗಿಣಿ

## ಹೊಸತಂಡದ ಹೊಸಪ್ರಯತ್ನ 'ಕೀರ್ತಿ ಐ ಲವ್ ಯು'

ಕನ್ನಡದಲ್ಲಿ ಪ್ರೀತಿಯ ಕುರಿತಾದ ಅನೇಕ ಚಿತ್ರಗಳು ಬಂದಿದೆ. ಆದರೆ ಒಂದರ ಹಾಗೆ ಒಂದು ಇಲ್ಲ. ಅದೇ ರೀತಿ ಹೊಸತಂಡವೊಂದು "ಕೀರ್ತಿ ಐ ಲವ್ ಯು" ಎಂಬ ಲವ್ ಜಾನರ್‌ನ ಚಿತ್ರವನ್ನು ತೆರೆಯ ಮೇಲೆ ತರುತ್ತಿದೆ. ಪೂಜಿತ ಎಸ್ ರಾವ್ ನಿರ್ಮಾಣದಲ್ಲಿ, ನಿರಂಜನ್ ಆರಾಧ್ಯ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಈ ಚಿತ್ರದ ನಾಯಕನಾಗಿ ಪ್ರಜ್ಯೋತ್ ಎಸ್ ರಾವ್ ನಟಿಸಿದ್ದಾರೆ. ನಿಧಿ ಗೌಡ ಈ ಚಿತ್ರದ ನಾಯಕಿ. ಇತ್ತೀಚೆಗೆ ಈ ಚಿತ್ರದ ಮೊದಲ ಹಾಡು "ಮುದ್ದಾದ ಮೂಗುತಿ" ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ಪ್ರಚಾರಕ್ಕೆ ಚಾಲನೆ ನೀಡಿದೆ. ಸಿರಿಮ್ಯೂಸಿಕ್ ನಲ್ಲಿ ಈ ಹಾಡು ಲಭ್ಯವಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನೃತ್ಯ ಕಲಾವಿದನಾಗಿರುವ ನನಗೆ ಮೊದಲಿನಿಂದಲೂ ನಿರ್ದೇಶನದ ಬಗ್ಗೆ ಆಸಕ್ತಿ. ಇದು ನನ್ನ ಮೊದಲ ನಿರ್ದೇಶನದ ಚಿತ್ರ. ಪ್ರೀತಿಯ ಕುರಿತು ಹಲವು ಚಿತ್ರಗಳು ಬಂದಿದೆಯಾದರೂ ನಾವು ಈ ಚಿತ್ರದಲ್ಲಿ ಪ್ರೀತಿಯ ಬಗ್ಗೆ ಹೇಳಿರುವ ವ್ಯಾಖ್ಯಾನವೇ ಬೇರೆ. ಅದರಲ್ಲೂ ಈಗಂತೂ ಚಿಕ್ಕವಯಸ್ಸಿನಲ್ಲೇ ಲವ್, ಡೇಟಿಂಗ್ ಎನ್ನುತ್ತಾರೆ. ಅದೆಲ್ಲಾ ತಪ್ಪು ಎಂದು ಯುವಜನತೆಗೆ ಜಾಗೃತಿ ಮೂಡಿಸುವ ಚಿತ್ರವೂ ಹೌದು. ಪ್ರಜ್ಯೋತ್ ಎಸ್ ರಾವ್ ನಾಯಕನಾಗಿ, ನಿಧಿ ಗೌಡ ನಾಯಕಿಯಾಗಿ ಅಭಿನಯಿಸಿದ್ದಾರೆ. ಅಭಿರಾಮ್ ಸಂಗೀತ ನೀಡಿರುವ ಮೂರು ಹಾಡುಗಳು ಚಿತ್ರದಲ್ಲಿದೆ. ಆ ಪೈಕಿ ಅರುಣ್ ಕುಮಾರ್ ಬರೆದು, ಅರ್ಫಾಜ್ ಉಲ್ಲಾಳ್ ಹಾಡಿರುವ ಮೊದಲ ಹಾಡು ಬಿಡುಗಡೆಯಾಗಿದೆ. ಚಿತ್ರದ ಚಿತ್ರೀಕರಣ ಬಹುತೇಕ ಮುಗಿದಿದೆ. ಚಿತ್ರ ಜುಲೈ 31ರಂದು ತೆರೆಗೆ ಬರುತ್ತಿದೆ ಎಂದು ನಿರ್ದೇಶಕ ನಿರಂಜನ್ ಆರಾಧ್ಯ ತಿಳಿಸಿದರು. ಆದರ್ಶ ಫಿಲಂ ಇನ್ಸ್ಟಿಟ್ಯೂಟ್‌ನಲ್ಲಿ ನಟನೆ ಕಲಿತಿದ್ದೇನೆ. ನಾಯಕನಟನಾಗಲು ಕಿಚ್ಚ ಸುದೀಪ್ ಅವರು ಸ್ಫೂರ್ತಿ. ನನ್ನ ಅಕ್ಕ ಪೂಜಿತಾ ಎಸ್. ರಾವ್ ಈ ಚಿತ್ರಕ್ಕೆ ಬಂಡವಾಳ ಹಾಕಿದ್ದಾರೆ. ಚಿತ್ರ ತಂಡದ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ನಾಯಕ ನನ್ನ ತಮ್ಮ ಪ್ರಜ್ಯೋತ್ ಎಸ್. ರಾವ್‌ಗೆ ಮೊದಲಿನಿಂದಲೂ ನಾಯಕನಾಗಬೇಕೆಂಬ ಆಸೆ ಇತ್ತು. ಅದು ಈಗ ಕೈಗೂಡಿದೆ ಎಂದರು.



## 'ಮಿಥುನಂ' ಚಿತ್ರದ ಕನ್ನಡ ಅವತರಣಿಕೆ ಬಿಡುಗಡೆ

ಭಾರತ ದೇಶ ಕಂಡ ಅತ್ಯುತ್ತಮ ಗಾಯಕ ಎಸ್.ಪಿ.ಬಾಲಸುಬ್ರಹ್ಮಣ್ಯಂ ಅತ್ಯುತ್ತಮ ನಟರೂ ಹೌದು. ಅವರು ಅಭಿನಯಿಸಿದ ಕೊನೆಯ ಚಿತ್ರ "ಮಿಥುನಂ". ಖ್ಯಾತ ನಿರ್ದೇಶಕ ತನಿಕೆಳ್ಳ ಭರಣಿ ಅವರ ನಿರ್ದೇಶನದ ಈ ತೆಲುಗು ಚಿತ್ರದ ಕನ್ನಡ ಅವತರಣಿಕೆ ಜೂನ್ 5 ರಂದು ಬಿಡುಗಡೆಯಾಗಲಿದೆ. ಜೂನ್ 4 ಎಸ್‌ಪಿಬಿ ಅವರ ಹುಟ್ಟುಹಬ್ಬ. ಈ ಸಂದರ್ಭದಲ್ಲಿ ಚಿತ್ರ ಕನ್ನಡದಲ್ಲಿ ಬಿಡುಗಡೆಯಾಗುತ್ತಿರುವುದು ವಿಶೇಷ. ಹರಿದಾಸರ ಚಿತ್ರಗಳ ನಿರ್ದೇಶಕರೆಂದೇ ಹೆಸರಾಗಿರುವ ಮಧುಸೂದನ್ ಹವಾಲ್ದಾರ್ ಹಾಗೂ ತ್ರಿವಿಕ್ರಮ ಜೋಶಿ ಅವರ ಸಾರಥ್ಯದಲ್ಲಿ ಈ ಚಿತ್ರದ ಕನ್ನಡದ ಅವತರಣಿಕೆ ಸಿದ್ಧವಾಗಿದೆ. ಶ್ರೀದೇವಿ ಶ್ರೀನಿವಾಸ್ ಈ ಚಿತ್ರವನ್ನು ಅರ್ಪಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಕನ್ನಡ ಅವತರಣಿಕೆಯ ಟೀಸರ್ ಬಿಡುಗಡೆ ಸಮಾರಂಭ ಹಾಗೂ ಪೂರ್ವಭಾವಿ ಪ್ರದರ್ಶನ ನಡೆಯಿತು. ನಟ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಉಪಾಧ್ಯಕ್ಷರಾದ ಸುಂದರರಾಜ್, ಎಸ್‌ಪಿಬಿ ಆಪ್ತರಾದ ಗೋಪಿ, ಸೌಂಡ್ ಆಫ್ ಮ್ಯೂಸಿಕ್ ಗುರುರಾಜ್, ಪಿ.ಆರ್.ಓ. ಸುಧೀಂದ್ರ ವೆಂಕಟೇಶ್, ಶ್ರೀದೇವಿ ಶ್ರೀನಿವಾಸ್ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿ, ಎಸ್‌ಪಿಬಿ ಅವರ ಜೊತೆಗಿನ ಒಡನಾಟವನ್ನು ಹಂಚಿಕೊಂಡರು. 'ಮಿಥುನಂ' ಕನ್ನಡದ ಅವತರಣಿಕೆ ಯಶಸ್ವಿಯಾಗಲೆಂದು ಹಾರೈಸಿದರು. ನಿರ್ಮಾಪಕರು ಕನ್ನಡದಲ್ಲಿ ಬಿಡುಗಡೆ ಮಾಡುವುದಕ್ಕೆ ಖುಷಿಯಿಂದ ರೈಟ್ಸ್ ನೀಡಿದರು.



## ನಿರ್ಮಾಣ ಸಂಸ್ಥೆ ತೆರೆದ ನಟಿ ಮೈತ್ರಿಯಾ ಗೌಡ

ಬಣ್ಣದಲೋಕಕ್ಕೆ ಒಮ್ಮೆ ಬಂದರೆ ಅದರಿಂದ ಹೊರಬರವುದು ಅಷ್ಟು ಸುಲಭವಾಗಿರುವುದಿಲ್ಲ. ಕೆಲವರು ನಟನೆಯಿಂದ ದೂರ ಉಳಿದರೂ, ಇದೇ ಕ್ಷೇತ್ರದಲ್ಲಿ ಏನಾದರೂ ಒಂದು ಕಾರ್ಯದಲ್ಲಿ ತೊಡಗಿಕೊಳ್ಳುತ್ತಾರೆ. ಆ ಸಾಲಿಗೆ ನಟಿ ಮೈತ್ರಿಯಾಗೌಡ ಸೇರಿಕೊಳ್ಳುತ್ತಾರೆ. 'ಮೌರ್ಯ' ಚಿತ್ರದಲ್ಲಿ ಪುನೀತ್ ರಾಜ್‌ಕುಮಾರ್ ತಂಗಿಯಾಗಿ ಪರಿಚಯಗೊಂಡು, ನಂತರ 8 ಸಿನಿಮಾಗಳಿಗೆ ನಾಯಕಿಯಾಗಿ ನಟಿಸಿದ್ದರು. ಕಾರಣಾಂತರದಿಂದ ಅಭಿನಯಕ್ಕೆ ಬ್ರೇಕ್ ನೀಡಿ ಸಾಮಾಜಿಕ ಸೇವೆ ಕಡೆ ಗಮನ ಹರಿಸಿದ್ದರು. ಈಗ 'ಮೈತ್ರಿ ಯಾ ಗ್ಲೋಬಲ್ ಟ್ರಸ್ಟ್' ಮೂಲಕ ಚಿತ್ರ ನಿರ್ಮಾಣ ಮಾಡಲು ಮುಂದಾಗಿದ್ದಾರೆ. ಇದರ ಮೊದಲ ಹಂತವಾಗಿ ನಟ ಅನಿರುದ್ಧ್, ಹಿರಿಯ ನಿರ್ಮಾಪಕ ಉದಯ್‌ಮೆಹ್ತಾ, ವಿಧಾನ ಪರಿಷತ್ ಸದಸ್ಯ ಶರವಣ ಟ್ರಸ್ಟ್ ಉದ್ಘಾಟನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಶುಭಹಾರೈಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮೈತ್ರಿಯಾಗೌಡ, ಇಂದು ನನ್ನ ಹುಟ್ಟುಹಬ್ಬದ ಸಲುವಾಗಿ ಸಂಸ್ಥೆ ಶುರು ಮಾಡಿದ್ದೇನೆ. ಚಿಕ್ಕವಳಿದ್ದಾಗ ಮುಂದೆ ಏನಾಗುತ್ತಿಯಾ ಅಂತ ಯಾರಾದರೂ ಕೇಳಿದರೆ, ನಾನು ನಟಿಯಾಗಬೇಕು, ಸಮಾಜಸೇವೆ ಮಾಡಬೇಕೆಂದು ಹೇಳುತ್ತಿದ್ದೆ. ನಾಯಕಿಯಾದ ಸಮಯದಲ್ಲಿ ಅನಿರುದ್ಧ್ ಮಾಡುತ್ತಿದ್ದ ಸೇವೆಗಳು, ಉದಯ್‌ಮೆಹ್ತಾ ಕಾರ್ಯವೈಖರಿ. ಇವರಿಬ್ಬರ ಪ್ರೇರಣೆಯಿಂದ ಟ್ರಸ್ಟ್ ಶುರು ಮಾಡಿದ್ದೇನೆ. ಇದರ ಮೂಲಕ ಹೊಸ ಪ್ರತಿಭೆಗಳಿಗೆ ಅವಕಾಶ ಮಾಡಿಕೊಡಲಾಗುವುದು. ಜತೆಗೆ ಅನಾಥಾಶ್ರಮ, ಗೋಶಾಲೆ, ವೃದ್ಧಾಶ್ರಮ, ಬೀದಿ ನಾಯಿಗಳ ರಕ್ಷಣೆ, ಫ್ಯಾಶನ್ ಷೋ ಇನ್ನಿತರೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.



## 'ಅಡಿಕ್ಷನ್' ಚಿತ್ರ ಬಿಡುಗಡೆಗೆ ಸಿದ್ದ

ಎಸ್.ಬಿ.ವಿ. ಪ್ರೊಡಕ್ಷನ್ಸ್ ಅಡಿಯಲ್ಲಿ ಬೃಂದಾ ಎನ್ ಜಯರಾಮ್ ರವರು ನಿರ್ಮಾಣ ಮಾಡಿರುವ 'ಅಡಿಕ್ಷನ್' ಎಂಬ ಕನ್ನಡ ಚಲನಚಿತ್ರವು ಸೆನ್ಸಾರ್ ಮಂಡಳಿಯಿಂದ ಮಕ್ಕಳ ಚಲನಚಿತ್ರ ಪ್ರಮಾಣಪತ್ರವನ್ನು ಪಡೆದುಕೊಂಡಿದೆ. ಚಿತ್ರ ಜೂನ್‌ನಲ್ಲಿ ಬಿಡುಗಡೆಯಾಗಲಿದೆ. ಇದು ಮಕ್ಕಳಲ್ಲಿನ ಮೊಬೈಲ್ ಚಟದ ಕುರಿತ ಕಥೆಯಾಗಿದ್ದು, ನೈಜ ಘಟನೆಗಳನ್ನು ಆಧರಿಸಿ ಈ ಕಥೆಯನ್ನು ರಚಿಸಲಾಗಿದೆ. ಅಜಯ್ ಕುಮಾರ್ ಎ ಜೆ ರವರು ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಇದು ನಿರ್ದೇಶಕರಿಗೆ ಎರಡನೇ ಚಿತ್ರ. ಈ ಚಿತ್ರದ ಮುಖ್ಯ ಪಾತ್ರದಲ್ಲಿ ಸುಂದರ ಕೃಷ್ಣ ಅರಸ್ ರವರ ಮೊಮ್ಮಗ, ನಾಗೇಂದ್ರ ಅರಸ್ ರವರ ಮಗ ವಿಧು ಸುಂದರಕೃಷ್ಣ ಅರಸ್ ನಟಿಸಿದ್ದಾರೆ. ಈ ಮೂಲಕ ಸುಂದರಕೃಷ್ಣ ಅರಸ್ ಅವರ ಮೂರನೇ ತಲೆಮಾರಿನ ಕುಡಿ ಸಹ ಚಿತ್ರರಂಗ ಪ್ರವೇಶಿಸಿದ್ದಾರೆ. ಇದು ಅವರ ಚೊಚ್ಚಲ ಸಿನಿಮಾ. ಹಾಗೆಯೇ ಅತಿಥಿ ಪಾತ್ರದಲ್ಲಿ ರಾಘವೇಂದ್ರ ರಾಜಕುಮಾರ್ ಹಾಗೂ 'ಲವ್ ಯು ಮುದ್ದು' ಖ್ಯಾತಿಯ ಸಿದ್ದು ಮೂಲಿಮನಿಯವರು ನಟಿಸಿದ್ದಾರೆ. ಉಳಿದಂತೆ ನಾ ನಿನ್ನ ಬಿಡಲಾರೆ ಧಾರಾವಾಹಿ ಖ್ಯಾತಿಯ ರಿಷಿಕ, ಕಾಟೇರ ಚಿತ್ರ ಹಾಗೂ ಅಣ್ಣಯ್ಯ ಧಾರಾವಾಹಿಯ ಬೇಬಿ ಅಂಕಿತ ಗೌಡ. ಮಾಸ್ಟರ್ ಆರುಷ್ ಗುಣಕಿಮಠ, ಶಾಮಸುಂದರ್, ಸುಂದರ್ ವೀಣಾ, ಹರೀಶ್ ರೈ, ಸಿತಾರಾ, ತನುಶ್ರೀ, ಅನುಪಮಾ ಪಂಚಾಕ್ಷರಿ, ಶೈಲೇಶ್, ಮುಂತಾದವರು ತಾರಾಬಳಗದಲ್ಲಿದ್ದಾರೆ. ವಿಶೇಷ ಪಾತ್ರದಲ್ಲಿ ನಿಮಾನ್ಸ್ ಮುಖ್ಯಸ್ಥರಾಗಿದ್ದ ಪದ್ಮಶ್ರೀ ಸಿ.ಆರ್. ಚಂದ್ರಶೇಖರ್ ಅಭಿನಯಿಸಿದ್ದಾರೆ. ಗುಂಡ್ಲುಪೇಟೆ ಸುರೇಶ್ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ದಿನೇಶ್ ಕುಮಾರ್ ಸಂಗೀತ ಸಂಯೋಜಿಸಿದ್ದಾರೆ.



## ಡೈರೆಕ್ಟರ್ ಆದ ನಟ ರಾಮ್ ಪೋತಿನೇನಿ

ತೆಲುಗಿನ ಪ್ರತಿಭಾನ್ವಿತ ನಟ ರಾಮ್ ಪೋತಿನೇನಿ ಇಂದು ಹುಟ್ಟುಹಬ್ಬದ ಸಂಭ್ರಮದಲ್ಲಿದ್ದಾರೆ. ಅವರ ಜನ್ಮದಿನದ ಪ್ರಯುಕ್ತ ರಾಮ್ ಹೊಸ ಸಿನಿಮಾ ಘೋಷಣೆಯಾಗಿದೆ. ಈ ಬಾರಿ ರಾಮ್ ಪೋತಿನೇನಿ ನಟನೆ ಜೊತೆಗೆ ನಿರ್ದೇಶನಕ್ಕೆ ಇಳಿದಿದ್ದಾರೆ. ಎನರ್ಜೆಟಿಕ್ ಸ್ಟಾರ್ ರಾಮ್ ಪೋತಿನೇನಿ ಆಂಧ್ರ ಕಿಂಗ್ ತಾಲೂಕಾ ಸಿನಿಮಾಗೆ ಸಾಹಿತ್ಯ ಬರೆದು ಸೈ ಎನಿಸಿಕೊಂಡಿದ್ದರು. ಇದೀಗ ಅವರು ಮತ್ತೊಂದು ಹೆಜ್ಜೆ ಮುಂದೆ ಇಟ್ಟು ಡೈರೆಕ್ಟರ್ ಕುರ್ಚಿ ಅಲಂಕರಿಸಿ ದ್ದಾರೆ. ತಮ್ಮ 23ನೇ ಚಿತ್ರಕ್ಕೆ ರಾಮ್ ಆಕ್ಷನ್ ಕಟ್ ಹೇಳುತ್ತಿದ್ದು, ಅವರ ಬರ್ತಡೇ ಪ್ರಯುಕ್ತ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ವೀರ ಪಾತ್ರದಲ್ಲಿ ರಾಮ್ ಪೋತಿನೇನಿ ನಟಿಸುತ್ತಿದ್ದು, ಜಾಕೆಟ್ ಧರಿಸಿ ವಿ ಕಟ್ ಹೇರ್ ಸ್ಟೈಲ್‌ನಲ್ಲಿ ಅವರು ಕಾಣಿಸಿಕೊಂಡಿದ್ದಾರೆ. ಆದರೆ ಮುಖ ರಿವೀಲ್ ಮಾಡದೆ ಕುತೂಹಲ ಹೆಚ್ಚಿಸಿದ್ದಾರೆ. ಸಿನಿಮಾಗೆ RAMO23 ಎಂಬ ತಾತ್ಕಾಲಿಕ ಶೀರ್ಷಿಕೆ ಇಡಲಾಗಿದೆ. ಜೂನ್‌ನಲ್ಲಿ ಚಿತ್ರೀಕರಣ ಆರಂಭವಾಗಲಿದ್ದು ಡಿಸೆಂಬರ್‌ನಲ್ಲಿ ಚಿತ್ರ ಬಿಡುಗಡೆ ಮಾಡಲು ಯೋಜನೆ ಹಾಕಿಕೊಂಡಿದ್ದಾರೆ.




## ಗಿಲ್ಲಿ ನಟನ ಸರ್ವೇ ನಂಬರ್ 45

ವಿನೂತನ ಶೀರ್ಷಿಕೆ 'ಸರ್ವೇ ನಂಬರ್ 45' ಚಿತ್ರವು ಪೋಸ್ಟ್ ಪ್ರೊಡಕ್ಷನ್ ಮುಕ್ತಾಯ ಹಂತದಲ್ಲಿದೆ. ವರನಂದಿ ಸಿನಿ ಸಂಸ್ಥೆಯು ನಿರ್ಮಾಣದ ಜವಬ್ದಾರಿಯನ್ನು ಹೊತ್ತುಕೊಂಡಿದೆ. ಆನಂದ್.ಎಸ್.ವಿ ಮತ್ತು ಹನುಮಂತರೆಡ್ಡಿ ಎಸ್.ಆರ್. ಸಹ ನಿರ್ಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ಶಿವಕುಮಾರ್ ಎಂ. ಶೆಟ್ಟಿಹಳ್ಳಿ ಸಿನಿಮಾಕ್ಕೆ ರಚನೆ, ಚಿತ್ರಕಥೆ, 2 ಹಾಡುಗಳನ್ನು ಬರೆದು ನಿರ್ದೇಶನ ಮಾಡಿದ್ದಾರೆ. ರೈತನ ಕೃಷಿ ಮಾಡುವ ಜಾಗಕ್ಕೆ ಸರ್ವೇನಂಬರ್ ಸರ್ಕಾರವು ನೀಡಿರುತ್ತದೆ. ಇದರ ಆತನಿಗೆ ಒಂದಲ್ಲ ಒಂದು ಕಷ್ಟ ಬರುತ್ತಲೇ ಇರುತ್ತದೆ ಅದನ್ನು ಹೇಗೆ ಎದುರಿಸುತ್ತಾನೆ ಎನ್ನುವುದೇ ಕಥೆ.



## 'ಮಹಾನ್' ಚಿತ್ರದಲ್ಲಿ ಕಿರಣ್ ಶ್ರೀನಿವಾಸ್

ಸದಭಿರುಚಿಯ ಚಿತ್ರಗಳ ನಿರ್ದೇಶಕ ಪಿ.ಸಿ. ಶೇಖರ್ ನಿರ್ದೇಶನದ, ಪ್ರತಿಷ್ಠಿತ ಸಂಸ್ಥೆಯ ಸಹಯೋಗದೊಂದಿಗೆ ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ಅವರು ನಿರ್ಮಿಸುತ್ತಿರುವ ಹಾಗೂ ಜನಪ್ರಿಯ ನಟ ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ 'ಮಹಾನ್' ಚಿತ್ರದ ಪ್ರಮುಖಪಾತ್ರದಲ್ಲಿ ಖ್ಯಾತನಟ ಕಿರಣ್ ಶ್ರೀನಿವಾಸ್ ಅಭಿನಯಿಸುತ್ತಿದ್ದಾರೆ. 'ಮಹಾನ್' ಚಿತ್ರದ ತಮ್ಮ ಪಾತ್ರದ ಬಗ್ಗೆ ಕಿರಣ್ ಶ್ರೀನಿವಾಸ್ ಈ ರೀತಿ ಹೇಳುತ್ತಾರೆ. 'ಮಹಾನ್' ಚಿತ್ರದ ನಿರ್ದೇಶಕ ಪಿ.ಸಿ.ಶೇಖರ್ ಅವರ ನಿರ್ದೇಶನದ ಹಿಂದಿನ ಚಿತ್ರಗಳು ನನಗೆ ಬಹಳ ಇಷ್ಟವಾಗಿತ್ತು. ಅವರ ನಿರ್ದೇಶನದ 'ಮಹಾನ್' ಚಿತ್ರದ ಪ್ರಮುಖ ಪಾತ್ರದಲ್ಲಿ ನಾನು ನಟಿಸಿರುವುದಕ್ಕೆ ಖುಷಿಯಾಗಿದೆ. 'ಮಹಾನ್' ಚಿತ್ರದಲ್ಲಿ ನಾನು ಈವರೆಗೂ ಮಾಡಿರದ ಪಾತ್ರ ಮಾಡಿದ್ದೇನೆ. ಈ ಪಾತ್ರ ಜನರ ಮನಸ್ಸಿನಲ್ಲಿ ಉಳಿಯುವ ಪಾತ್ರವಾಗುತ್ತದೆ ಎಂಬ ಭರವಸೆ ಇದೆ. ನಿರ್ದೇಶಕರು ಕಥೆ ಹೇಳಿದಾಗಲೇ ನನ್ನ ಪಾತ್ರ ಮನಸ್ಸಿಗೆ ಬಹಳ ಹತ್ತಿರವಾಗಿತ್ತು. ಇನ್ನೂ, ಕೆಲವು ವರ್ಷಗಳ ಹಿಂದೆ ವಿಜಯ ರಾಘವೇಂದ್ರ ಅವರು ತೀರ್ಪುಗಾರರಾಗಿದ್ದ ರಿಯಾಲಿಟಿ ಶೋನಲ್ಲಿ ನಾನು ನಿರೂಪಕನಾಗಿದ್ದೆ. ಆಗ ಅವರು ತೋರಿದ ಪ್ರೀತಿ ಇನ್ನೂ ಕಣ್ಣ ಮುಂದೆ ಇದೆ ಎಂದರು.



## 'ರಕ್ಕಿ' ಚಿತ್ರದ ಮೊದಲ ಹಾಡು 'ರಗಡೋ ರಕ್ಕಿ' ಬಿಡುಗಡೆ

ಬಹು ನಿರೀಕ್ಷಿತ 'ರಕ್ಕಿ' ಚಿತ್ರದ 'ರಗಡೋ ರಕ್ಕಿ' ಹಾಡು ಇತ್ತೀಚೆಗೆ PRK Audio ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದೆ. ಯುವಜನತೆ ಹಾಗೂ ಸಂಗೀತ ಪ್ರೇಮಿಗಳಲ್ಲಿ ಭಾರೀ ಸಂಚಲನ ಮೂಡಿಸಿರುವ ಈ ಹಾಡು ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಇದು 'ರಕ್ಕಿ' ಚಿತ್ರದ ಮೊದಲ ಗೀತೆಯಾಗಿದೆ. ಈ ಚಿತ್ರದ ಮೂಲಕ ನಾಯಕನಾಗಿ ಚಿತ್ರರಂಗ ಪ್ರವೇಶಿಸುತ್ತಿರುವ ರಕ್ಕಿ ಸುರೇಶ್, ಈ ಹಾಡಿನಲ್ಲಿ ತಮ್ಮ ಎನರ್ಜಿ ಟಿಕ್ ಸ್ಕ್ರೀನ್ ಪ್ರೆಸೆನ್ಸ್, ಸ್ಟೈಲಿಶ್ ಲುಕ್ ಹಾಗೂ ಅದ್ಭುತ ಡ್ಯಾನ್ಸ್ ಮೂಲಕ ಪ್ರೇಕ್ಷಕರ ಗಮನ ಸೆಳೆದಿದ್ದಾರೆ. ಭರ್ಜರಿ ನೃತ್ಯ ಸಂಯೋಜನೆ ಹಾಗೂ ಕಲರ್ ಫುಲ್ ದೃಶ್ಯಗಳೊಂದಿಗೆ ಈ ಹಾಡು ರಕ್ಕಿ ಸುರೇಶ್ ಅವರನ್ನು ಹೊಸ ತಲೆಮಾರಿನ ಮಾಸ್ ಹೀರೋ ಆಗಿ ಪರಿಚಯಿಸುತ್ತದೆ.



## ಮೋಡ ಕವಿದ ವಾತಾವರಣ ಜೂನ್ 26ಕ್ಕೆ ತೆರೆಗೆ

ಸಿಂಪಲ್ ಸುನಿ ಸಾರಥ್ಯದಲ್ಲಿ ಮೂಡಿ ಬಂದಿರುವ ಮೋಡ ಕವಿದ ವಾತಾವರಣ ಸಿನಿಮಾ ಟೈಟಲ್ ಹಾಗೂ ತನ್ನ ಕಂಟೆಂಟ್‌ನಿಂದ ಗಾಂಧಿನಗರದಲ್ಲಿ ನಿರೀಕ್ಷೆ ಹೆಚ್ಚು ಮಾಡಿದೆ. ಜೂನ್ 26ರಂದು ಈ ಚಿತ್ರ ತೆರೆಗೆ ಬರ್ತಿದ್ದು, ಇದೀಗ ಸಿನಿಮಾ ಸೆನ್ಸಾರ್ ಪಾಸಾಗಿದೆ. ಮೋಡ ಕವಿದ ವಾತಾವರಣ ಚಿತ್ರಕ್ಕೆ ಸೆನ್ಸಾರ್ ಮಂಡಲಿ ಯು/ಎ ಪ್ರಮಾಣ ಪತ್ರ ಕೊಟ್ಟಿದೆ. ಯಾವುದೇ ಕಟ್ ಇಲ್ವೆ ಮ್ಯೂಟ್ ಇಲ್ಲದೇ ಕ್ಲಿಯರ್ ಆದ ಯು/ಎ ಪ್ರಮಾಣ ಪತ್ರ ಸಿಕ್ಕಿದೆ. ಮೋಡ ಕವಿದ ವಾತಾವರಣದಲ್ಲಿ ಸಿಂಪಲ್ ಸುನಿ ತಮ್ಮ ಶಿಷ್ಯನಿಗಾಗಿ ಆಕ್ಷನ್‌ಕಟ್ ಹೇಳಿದ್ದಾರೆ. ಸುನಿ ಗರಡಿಯಲ್ಲಿ ಪಳಗಿರುವ ಯುವ ಪ್ರತಿಭೆ ಶೀಲಮ್ ಈ ಸಿನಿಮಾ ನಾಯಕ. ಶೀಲಮ್ ಅವರು ಈ ಹಿಂದೆ ಹಲವು ಸಿನಿಮಾಗಳಲ್ಲಿ ಸಣ್ಣಪುಟ್ಟ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದರು. ಆದರೆ ಈಗ 'ಮೋಡ ಕವಿದ ವಾತಾವರಣ'ದ ಮೂಲಕ ಪೂರ್ಣ ಪ್ರಮಾಣದ ನಾಯಕನಾಗಿ ಅದೃಷ್ಟ ಪರೀಕ್ಷೆಗೆ ಇಳಿಯುತ್ತಿ ದ್ದಾರೆ. ಹದಿಹರೆಯದ GEN-G ಲವ್ ಸ್ಟೋರಿ ಹೊಂದಿರುವ ಮೋಡಕವಿದ ವಾತಾವರಣ ಚಿತ್ರದಲ್ಲಿ ಶೀಲಮ್‌ಗೆ ಜೋಡಿಯಾಗಿ ಸಾತ್ವಿಕಾ ಹಾಗೂ ಮೋಕ್ಷಾ ಕುಶಾಲ್ ನಟಿಸಿದ್ದಾರೆ.



## ನೀನಿದ್ದರೆ ಆಲ್ಬಂ ಹಾಡು ಬಿಡುಗಡೆ


ಮೊಗಾಚಿ ಲಾರಂ ಕ್ರಿಯೇಶನ್ ಅಡಿಯಲ್ಲಿ ಸಿದ್ದಗೊಂಡಿರುವ 'ನೀನಿದ್ದರೆ' 5.52 ನಿಮಿಷದ ಆಲ್ಬಂ ಸಾಂಗ್ ಸಿರಿ ಮ್ಯೂಸಿಕ್ ಸಂಸ್ಥೆಯು ಹೊರತಂದಿದೆ. ಹಿರಿಯ ನಟ ರಮೇಶ್ ಭಟ್ ಹಾಡನ್ನು ಲೋಕಾರ್ಪಣೆಗೊಳಿಸಿ ತಂಡಕ್ಕೆ ಶುಭ ಹಾರೈಸಿದರು ಈ ಸಂದರ್ಭದಲ್ಲಿ ಮಾತನಾಡುತ್ತಾ, ನಿರ್ಮಾಪಕರು ನನ್ನನ್ನು ಫಾದರ್ ಅಂತ ಸಂಭೋದಿಸುತ್ತಾರೆ. ಆದರೆ ನನಗೆ ಅವರು ಗಾಡ್‌ಫಾದರ್. ಮಂಗಳೂರಿಗೆ ಶೂಟಿಂಗ್ ಅಂತ ಹೋದಾಗ, ತಪ್ಪದೆ ಭೇಟಿಯಾಗುವುದು ಅಲ್ಲದೆ ಉಡುಗೊರೆ ನೀಡುತ್ತಾರೆ. ಇಂತಹವರ ಋಣ ತೀರಿಸಲು ಬ್ಯುಸಿ ಇದ್ದರೂ ಬಂದಿರುವೆ. ಸದ್ಯ ವೆಬ್ ಸೀರೀಸ್‌ದಲ್ಲಿ ಅಭಿನಯಿಸುತ್ತಿದ್ದೇನೆಂದು ಹೇಳಿ ರಮೇಶ್ ಭಟ್ ನಿರ್ಗಮಿಸಿದರು. ಇದೇ ಸಮಯದಲ್ಲಿ ಟೆನ್ನಿಸ್ ಕೃಷ್ಣ ಮತ್ತು ಸಿರಿ ಮ್ಯೂಸಿಕ್ ಮಾಲೀಕರಾದ ಸುರೇಶ್ ಚಿಕ್ಕಣ್ಣ ಉಪಸ್ತಿತರಿದ್ದರು. ಮಂಗಳೂರು ಮೂಲ, ಸದ್ಯ ಆಸ್ಟ್ರೇಲಿಯಾ ನಿವಾಸಿ, ಅನಿವಾಸಿ ಭಾರತೀಯ ನೂರ್‌ಬರ್ಟ್ ನಿರ್ಮಾಣ ಮಾಡಿದ್ದಾರೆ. ಕಥೆ, ಚಿತ್ರಕಥೆ, ಸಾಹಿತ್ಯ, ಸಂಗೀತ ಮತ್ತು ಆಕ್ಷನ್ ಕಟ್ ಹೇಳಿರುವುದು ವಿನ್ಸೆಂಟ್ ಫರ್ನಾಂಡಿಸ್ ಕಾಸ್ಸಿಯಾ.


















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021